**ಕರ್ನಾಟಕ ಸರ್ಕಾರ**

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

## ಮಾಹಿತಿ ಹಕ್ಕು ಅಧಿನಿಯಮ

**(ದಿನಾಂಕ: 31–03–2018 ರಂದು ಇರುವಂತೆ)**


***ಜಿಲ್ಲಾ ಅಧಿಕಾರಿಗಳ ಕಛೇರಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಚಿಕ್ಕಬಳ್ಳಾಪುರ ಜಿಲ್ಲಾ***

***ಆಡಳಿತ ಭವನ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ.***

ಇ–ಮೇಲ್– dobcmchikkaballapura@gmail.com

BCWD/14012/01/2018 ದಿನಾಂಕ: 31–03–2018

**ಕರ್ನಾಟಕ ಸರ್ಕಾರ**

## ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಚಿಕ್ಕಬಳ್ಳಾಪುರ
## ಮಾಹಿತಿ ಹಕ್ಕು ಅಧಿನಿಯಮದ ಸೆಕ್ಷನ್ 4(1)(ಎ) ರಡಿ ಸಾರ್ವಜನಿಕರಿಗೆ ಮಾಹಿತಿ

ಮಾಹಿತಿ ಹಕ್ಕು ಅಧಿನಿಯಮ 2005 ರ ಅಡಿಯಲ್ಲಿ ಸಾರ್ವಜನಿಕರು ಕೋರಿದಂತಹ ಮಾಹಿತಿಯನ್ನು ಅಧಿನಿಯಮದ ಪರಿಮಿತಿಯೊಳಗೆ ಪೂರೈಸುವುದು ಕಡ್ಡಾಯವಾಗಿರುತ್ತದೆ. ಸದರಿ ನಿಯಮದ ಸೆಕ್ಷನ್ 4(1)(ಎ) ಅಡಿಯಲ್ಲಿ ಸರ್ಕಾರದ ಎಲ್ಲಾ ಇಲಾಖೆಗಳು ತಮ್ಮ ಇಲಾಖೆಯ ವತಿಯಿಂದ ಸಾರ್ವಜನಿಕರಿಗೆ ಒದಗಿಸಬೇಕಾದಂತಹ ಮಾಹಿತಿಯನ್ನೊಳಗೊಂಡ ಒಂದು ಕೈಪಿಡಿಯನ್ನು ತಯಾರಿಸಬೇಕಾಗಿರುತ್ತದೆ. ಇಂತಹ ಕೈಪಿಡಿಯು ಇಲಾಖೆಯ ಆಡಳಿತ ಸ್ವರೂಪ, ಇಲಾಖೆಯಿಂದ ಅನುಷ್ಠಾನಗೊಳಿಸುವ ಕಾರ್ಯಕ್ರಮಗಳು, ಇಲಾಖೆಯ ಕಾರ್ಯ ವ್ಯವಹಾರಗಳು ಯಾವ ಅಧಿನಿಯಮ ಹಾಗೂ ನಿಯಮಗಳಡಿ ನಿರ್ವಹಿಸಲ್ಪಡುತ್ತವೆ, ಇಲಾಖೆಯ ಅಸ್ತಿತ್ವದ ಉದ್ದೇಶ ಹಾಗೂ ಇಲಾಖೆಯಿಂದ ಸೌಲಭ್ಯ ಪಡೆಯುವ ಜನಾಂಗ/ ಸಮುದಾಯ, ಇಲಾಖೆಯ ಕಾರ್ಯ ನಿರ್ವಹಣೆ ಹಾಗೂ ಉದ್ದೇಶಿತ ಗುರಿಸಾಧನೆಗೆ ಸರ್ಕಾರದಿಂದ ಒದಗಿಸಿದ ಅನುದಾನ ಇತ್ಯಾದಿಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಒಳಗೊಂಡಿರಬೇಕಾಗುತ್ತದೆ. ಈ ನಿಟ್ಟಿನಲ್ಲಿ ಜಿಲ್ಲಾ ಮಟ್ಟದಲ್ಲಿ ಒಂದು ಸಾರ್ವಜನಿಕ ಪ್ರಾಧಿಕಾರವೆಂದು ಪರಿಗಣಿಸಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯ ಚಟುವಟಿಕೆಗಳಿಗೆ ಸಂಬಂಧಪಟ್ಟಂತೆ ಸಾರ್ವಜನಿಕರಿಗೆ ಮಾಹಿತಿಯನ್ನು ಒದಗಿಸುವ ದೃಷ್ಠಿಯಿಂದ ಇದನ್ನು ಪ್ರಕಟಿಸಲಾಗಿದೆ.

ಈ ಕೈಪಿಡಿಯಲ್ಲಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸರ್ಕಾರವು ಒದಗಿಸಿರುವ ಆಯವ್ಯಯ, ಇಲಾಖೆಯ ಅಧಿಕಾರಿಗಳ ವಿವರ ಹಾಗೂ ದೂರವಾಣಿ ವಿವರ, ಇಲಾಖೆಯಿಂದ ಹಿಂದುಳಿದ ವರ್ಗಗಳಿಗೆ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳು, ಹಿಂದುಳಿದ ವರ್ಗಗಳ ಮೀಸಲಾತಿ ನೀತಿ ಹಾಗೂ ಹಿಂದುಳಿದ ವರ್ಗಗಳ ವರ್ಗೀಕರಣ ಹಾಗೂ ಜಾತಿಗಳ ಪಟ್ಟಿ, ಕರ್ನಾಟಕ ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗ ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿಯಲ್ಲಿ ಮೀಸಲಾತಿ ಮುಂತಾದವುಗಳು) ಅಧಿನಿಯಮ 1990 ಹಾಗೂ ತತ್ಸಂಬಂಧ ನಿಯಮಗಳು 1992 ಇತ್ಯಾದಿ ವಿವರಗಳನ್ನು ಸಾರ್ವಜನಿಕ ಮಾಹಿತಿಗಾಗಿ ಇಲ್ಲಿ ನೀಡಲಾಗಿದೆ.

ಅಲ್ಲದೇ ಈ ಕೈಪಿಡಿಯಲ್ಲಿ ಇಲಾಖೆಯಿಂದ ಮಾಹಿತಿ ಹಕ್ಕು ಅಧಿನಿಯಮ 2005 ರಡಿ ಮಾಹಿತಿ ಪಡೆಯಲಿಚ್ಛಿಸುವ ಸಾರ್ವಜನಿಕರ ತಿಳುವಳಿಕೆಗಾಗಿ ಸೆಕ್ಷನ್ 5ರಡಿ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನೇಮಿಸಲಾದ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಸಹಾಯಕ ಮಾಹಿತಿ ಅಧಿಕಾರಿಗಳು, ಮೇಲ್ಮನವಿ ಪ್ರಾಧಿಕಾರಿಗಳು ಇತ್ಯಾದಿ ವಿವರಗಳನ್ನು ಒದಗಿಸಲಾಗಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಇನ್ನೂ ಅನೇಕ ವಿವರಗಳು ಇಲಾಖೆಯ ವೆಬ್‌ಸೈಟ್ (www.backwardclasses@kar.nic.in) ನಲ್ಲಿ ಲಭ್ಯವಿರುತ್ತವೆ.

ಸಾರ್ವಜನಿಕರು ಇಲಾಖೆ ಕುರಿತಂತೆ ತಿಳಿದುಕೊಳ್ಳಬಹುದಾದ ಮಾಹಿತಿಯನ್ನು ಈ ಪ್ರಕಟಣೆಯಿಂದ ಪಡೆದುಕೊಳ್ಳಲು ಅನುಕೂಲವಾಗುವುದೆಂದು ಭಾವಿಸುತ್ತೇನೆ.

**ಜಿಲ್ಲಾ ಅಧಿಕಾರಿಗಳು**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಚಿಕ್ಕಬಳ್ಳಾಪುರ.**

ಇವರಿಗೆ

1] ಆಯುಕ್ತರು ಕರ್ನಾಟಕ ರಾಜ್ಯ ಮಾಹಿತಿ ಆಯೋಗ, ಬೆಂಗಳೂರು

2] ಕಾರ್ಯದರ್ಶಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು

3] ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು

4] ಜಿಲ್ಲಾಧಿಕಾರಿಗಳು ಚಿಕ್ಕಬಳ್ಳಾಪುರ ಜಿಲ್ಲೆ ಚಿಕ್ಕಬಳ್ಳಾಪುರ.

5] ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಚಿಕ್ಕಬಳ್ಳಾಪುರ.

6] ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು

7] ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,

8] ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು,

9] ಎಲ್ಲಾ ತಾಲ್ಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿಗಳು,

10] ಕಛೇರಿ ಪ್ರತಿ.

ಪರಿವಿಡಿ


| ಅಧ್ಯಾಯ ಕ್ರ.ಸಂ | ವಿವರಗಳು | ಪುಟ ಸಂಖ್ಯೆ |
|---|---|---|
| 1 | ಸಂಘಟನೆ, ಪ್ರಕಾರ್ಯಗಳು ಮತ್ತು ಕರ್ತವ್ಯಗಳ ವಿವರಗಳು | 1–4 |
| 2 | ಅಧಿಕಾರಿಗಳು ಮತ್ತು ನೌಕರರ ಕರ್ತವ್ಯಗಳು ಮತ್ತು ತೀರ್ಮಾನ ಕೈಗೊಳ್ಳುವಲ್ಲಿ ಅವರು ಅನುಸರಿಸುವ ಕಾರ್ಯ ವಿಧಾನ | 5–9 |
| 3 | ತೀರ್ಮಾನ ತೆಗೆದುಕೊಳ್ಳುವಾಗ ಅನುಸರಿಸುವ ನೀತಿ–ನಿಯಮಗಳು ಮೇಲ್ವಿಚಾರಣೆಯ ವಿಧಾನ ಮತ್ತು ಉತ್ತರದಾಯಿತ್ವದ ವಿವರಗಳು | 10–14 |
| 4 | ಮೇಲ್ವಿಚಾರಣೆ ಮತ್ತು ಹೊಣೆಗಾರಿಯನ್ನೊಳಗೊಂಡು, ಅಧಿಕಾರಿಗಳು ಮತ್ತು ನೌಕರರು ತೀರ್ಮಾನ ಕೈಗೊಳ್ಳುವಾಗ ಅನುಸರಿಸಬೇಕಾದ ಕಾರ್ಯವಿಧಾನ | 14 |
| 5 | ತಾವು ಹೊಂದಿರುವ ಅಥವಾ ತಮ್ಮ ಸ್ವಾಮ್ಯದಲ್ಲಿರುವ ಅಥವಾ ಕರ್ತವ್ಯಗಳನ್ನು ನಿರ್ವಹಿಸಲು ತಮ್ಮ ನೌಕರರು ಉಪಯೋಗಿಸುವ ನಿಯಮಗಳು, ನಿಬಂಧನೆಗಳು, ಸೂಚನೆಗಳು, ಕೈಪಿಡಿಗಳು ಮತ್ತು ದಾಖಲೆಗಳು | 15 |
| 6 | ಪ್ರಕಾರ್ಯಗಳನ್ನು ಅನುಷ್ಠಾನ ತರುವಲ್ಲಿ ನಿಗದಿಗೊಳಿಸುವ ನಿಬಂಧನೆಗಳು ಮತ್ತು ಮಾರ್ಗ ಸೂಚಿಗಳು | 15 |
| 7 | ತಮ್ಮಲ್ಲಿರುವ ಎಲ್ಲಾ ವಿವಿಧ ದಸ್ತಾವೇಜುಗಳ ಪಟ್ಟಿ | 15 |
| 8 | ಪ್ರಾಧಿಕಾರ ಅಗತ್ಯವಾಗಿ ಸಂಗ್ರಹಿಸಿಟ್ಟುಕೊಳ್ಳಬೇಕಾದ ದಾಖಲೆಗಳು | 16 |
| 9 | ಪ್ರಾಧಿಕಾರ ತನ್ನ ನೀತಿ ನಿಯಮ ಅಥವಾ ಕಾರ್ಯ ಯೋಜನೆಯನ್ನು ಅನುಷ್ಠಾನಗೊಳಿಸಲು ಸಲಹೆ–ಸೂಚನೆ ಪಡೆಯುವ ಅಥವಾ ಸಮಾಲೋಚನೆಯ ವ್ಯವಸ್ಥೆ ಅಥವಾ ಪರಿಣಿತರ ತಂಡದ ಸೇವೆ ಪಡೆಯುತ್ತಿದ್ದಲ್ಲಿ ಇವುಗಳ ವಿವರ. | 16 |
| 10 | ಪ್ರಾಧಿಕಾರದಲ್ಲಿ ಇವರು ಸ್ಥಾಯಿ ಸಮಿತಿಗಳು, ಮಂಡಳಿಗಳು, ಪರಿಷತ್ತುಗಳು, ಸಮಿತಿಗಳು ಮತ್ತು ಎರಡು ಅಥವಾ ಮೂರು ವ್ಯಕ್ತಿಗಳನ್ನೊಳಗೊಂಡ ಸಲಹಾ ಸಮಿತಿಗಳ ಪಟ್ಟಿ, ಹಾಗೂ ಈ ಮಂಡಳಿ, ಪರಿಷತ್ತು, ಸಮಿತಿಗಳ ಸಮಾವೇಶಗಳಿಗೆ, ಸಾರ್ವಜನಿಕರಿಗೆ ಅವಕಾಶವಿರುತ್ತದೆಯೇ ಅಥವಾ ಈ ಕಾರ್ಯ ಕಲಾಪಗಳ ವರದಿಯು ಸಾರ್ವಜನಿಕರಿಗೆ ಲಭ್ಯವಿರುತ್ತದೆಯೇ, | 16–17 |
| 11 | ಕಛೇರಿಯ ಅಧಿಕಾರಿಗಳ ಮತ್ತು ನೌಕರರ ವಿವರ ಸೂಚಿಕೆ | 18 |
| 12 | ಅಧಿಕಾರಿಗಳು ಮತ್ತು ನೌಕರರು ನಿಯಮಗಳನ್ವಯ ನೀಡುವ ಪರಿಹಾರವನ್ನು ಸೇರಿಸಿಕೊಂಡು, ಪಡೆದುಕೊಳ್ಳುವ ಮಾಸಿಕ ವೇತನ | 18–26 |
| 13 | ಪ್ರತಿ ಸಂಸ್ಥೆಯ ಕಾರ್ಯಾಲಯಕ್ಕೆ ನಿಗದಿಪಡಿಸಿರುವ ವಾರ್ಷಿಕ ಅಯವ್ಯಯದ ಪಟ್ಟಿ ಇದರಲ್ಲಿ ಎಲ್ಲಾ ಯೋಜನೆಗಳು, ಪ್ರಸ್ತಾಪಿಸಿದ ಖರ್ಚು ಮತ್ತು ಬಟವಾಡೆಗಳ ವರದಿ | 27–28 |
| 14 | ಸಹಾಯಧನ ನೀಡುವ ಯೋಜನೆಗಳ ಅನುಷ್ಠಾನದಲ್ಲಿ ಅನುಸರಿಸುವ ರೀತಿ ನೀತಿಗಳು, ಮಾರ್ಗಸೂಚಿಗಳು, ಸುತ್ತೋಲೆಗಳು, ಸಹಾಯಧನದ ಮೊತ್ತ ಮತ್ತು ಫಲಾನುಭವಿಗಳ ವಿವರ | 29 |
| 15 | ಪ್ರಾಧಿಕಾರದಿಂದ ಸವಲತ್ತು ಅಥವಾ ಪರವಾನಿಗೆ ಪತ್ರ ಅಥವಾ ಅಧಿಕಾರ ಪತ್ರ ನೀಡುವ ವಿವರಗಳು | 29–34 |
| 16 | ವಿದ್ಯುನ್ಮಾನದ ಮೂಲಕ ಲಭ್ಯವಿರುವ ಅಥವಾ ಹೊಂದಿರುವ ಮಾಹಿತಿಗಳು ಹಾಗೂ ಮಾಹಿತಿಯ ವಿವರಗಳು | 34 |
| 17 | ಮಾಹಿತಿಯನ್ನು ಪಡೆಯುವುದಕ್ಕಾಗಿ ನಾಗರಿಕರಿಗೆ ದೊರೆಯಬಹುದಾದ ಅನುಕೂಲತೆಗಳ ವಿವರಗಳು– ಸಾರ್ವಜನಿಕರಿಗೆ ಲಭ್ಯವಿದ್ದಲ್ಲಿ ಗ್ರಂಥಾಲಯ, ವಾಚನಾಲಯದ ಕೆಲಸದ ವೇಳೆ– ನಮೂದಿಸುವುದು. | 34–35 |
| 18 | ಸಾರ್ವಜನಿಕ ಮಾಹಿತಿ ನೀಡುವ (ಸಂಪರ್ಕ) ಅಧಿಕಾರಿಗಳ ಹೆಸರುಗಳು, ಹುದ್ದೆ ಮತ್ತು ಇತರ ವಿವರಗಳು ಅಂದರೆ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಮೇಲ್ಮನವಿ ಪ್ರಾಧಿಕಾರದ ಹುದ್ದೆ, ದೂರವಾಣಿ ಸಂಖ್ಯೆ ಇತರ ವಿವರಗಳು | 35–39 |
| 19 | ಕಾಲ ಕಾಲಕ್ಕೆ ಪ್ರಕಟಿಸುವ ವಾರ್ಷಿಕ ಪ್ರಕಟಣೆಗಳು ಮತ್ತು ನಿಯತಕಾಲಿಗಳು | 40 |

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

## ಅಧ್ಯಾಯ–1

### ಸಂಘಟನೆ, ಪ್ರಕಾರ್ಯಗಳು ಮತ್ತು ಕರ್ತವ್ಯಗಳ ವಿವರಗಳು

ಶ್ರೀ ಎಲ್.ಜಿ. ಹಾವನೂರ್ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಮೊದಲನೆ ಹಿಂದುಳಿದ ವರ್ಗಗಳ ಆಯೋಗವು ನೀಡಿದ ಶಿಫಾರಸ್ಸುಗಳನ್ವಯ 1977 ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಒಂದು ಪ್ರತ್ಯೇಕ ಇಲಾಖೆಯನ್ನು ಸ್ಥಾಪಿಸಲಾಗಿದ್ದು, ರಾಜ್ಯಮಟ್ಟದಲ್ಲಿ ನಿರ್ದೇಶನಾಲಯ ಹಾಗೂ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾ ಕಛೇರಿಗಳನ್ನು ಸ್ಥಾಪಿಸಿ ಹಿಂದುಳಿದ ವರ್ಗದವರು ಶಿಕ್ಷಣ ಹಾಗೂ ಸ್ವಯಂ ಉದ್ಯೋಗವನ್ನು ಹೊಂದಲು ಪೂರಕವಾದ ಶೈಕ್ಷಣಿಕ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಹಿಂದುಳಿದ ವರ್ಗಗಳಿಗೆ ಭಾರತದ ಸಂವಿಧಾನದ ಅನುಚ್ಛೇದ 15(14) ಮತ್ತು 16(4) ರಡಿಯಲ್ಲಿ ಶೈಕ್ಷಣಿಕ ಹಾಗೂ ಔದ್ಯೋಗಿಕ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ.

ಪ್ರಾರಂಭದಲ್ಲಿ ಅಲ್ಪಸಂಖ್ಯಾತ ಸಮುದಾಯದವರಿಗೂ ಸಹ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿತ್ತು. ಆದರೆ ಅಲ್ಪಸಂಖ್ಯಾತರಿಗೆ ಪ್ರತ್ಯೇಕವಾಗಿ 1986 ರಲ್ಲಿ ಅಭಿವೃದ್ಧಿ ನಿಗಮ ಹಾಗೂ 1999 ರಲ್ಲಿ ಪ್ರತ್ಯೇಕವಾದ ಇಲಾಖೆಯನ್ನು ಸ್ಥಾಪಿಸಲಾಗಿರುತ್ತದೆ.

2017–18ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಕಾರ್ಯಕ್ರಮಗಳಿಗೆ ಒಟ್ಟು ರೂ.2733.26 ಕೋಟಿ ಆಯವ್ಯಯವನ್ನು ಒದಗಿಸಲಾಗಿದೆ. ಇಲಾಖೆಯಿಂದ ಅನುಷ್ಠಾನ/ಜಾರಿಗೊಳಿಸಲಾಗುತ್ತಿರುವ ಕಾರ್ಯಕ್ರಮಗಳು ಈ ಕೆಳಗಿನಂತಿವೆ.

**ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯಕ್ರಮಗಳ ವಿವರ**

| | |
|---|---|
| ಶೈಕ್ಷಣಿಕ ಕಾರ್ಯಕ್ರಮಗಳು | |
| ವಿದ್ಯಾರ್ಥಿನಿಲಯಗಳ ನಿರ್ವಹಣೆ | |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು |
| 3 | ಸರ್ಕಾರಿ ಆಶ್ರಮಶಾಲೆಗಳು |
| 4 | ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು |
| 5 | ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು |
| 6 | ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ |
| 7 | ಮೊರಾರ್ಜಿ ದೇಸಾಯಿ ವಸತಿಶಾಲೆ/ ಕಾಲೇಜುಗಳು |
| 8 | ಡಿಜಿಟಲ್ ಗ್ರಂಥಾಲಯಗಳು |
| | ವಿದ್ಯಾರ್ಥಿ ವೇತನ ಕಾರ್ಯಕ್ರಮಗಳು |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ |
| 3 | ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ |
| 4 | ಪೂರ್ಣ ಶುಲ್ಕ ಪಾವತಿಯೊಂದಿಗೆ ಹಿಂದುಳಿದ ವರ್ಗಗಳ ಮೆಟ್ರಿಕ್ – ನಂತರದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ |
| 5 | ಶುಲ್ಕ ಮರು ಪಾವತಿ |
| 6 | ಪೂರ್ಣಾವಧಿ ಪಿ.ಎಚ್.ಡಿ ಮಾಡುವ ವಿದ್ಯಾರ್ಥಿಗಳಿಗೆ ಫೆಲೋಷಿಪ್ |
| 7 | ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ |
| 8 | ದೇವರಾಜ ಅರಸು ಪ್ರತಿಭಾ ಪುರಸ್ಕಾರ |

| | |
|---|---|
| 9 | ನಿಲಯಾರ್ಥಿಗಳಿಗೆ ಪ್ರೋತ್ಸಾಹಧನ |
| 10 | ಐ.ಐ.ಟಿ, ಐ.ಐ.ಎಂ, ಐ.ಐ.ಎಸ್ಸಿ ಇತ್ಯಾದಿಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಒಂದು ಬಾರಿ ರೂ.2.00 ಲಕ್ಷ ಪ್ರೋತ್ಸಾಹಧನ |
| | ತರಬೇತಿ ಕಾರ್ಯಕ್ರಮಗಳು |
| 1 | ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿ |
| 2 | ನರ್ಸಿಂಗ್ ತರಬೇತಿ |
| 3 | ಕೌಶಲ್ಯ ತರಬೇತಿ ಕಾರ್ಯಕ್ರಮ |
| 4 | ಕಾನೂನು ಪದವೀಧರರಿಗೆ ಶಿಷ್ಯವೇತನ |
| 5 | ಹೊಲಿಗೆ ತರಬೇತಿ ಕೇಂದ್ರಗಳ ನಿರ್ವಹಣೆ |
| 6 | ಸೇನೆಗಳಿಗೆ ಆಯ್ಕೆಯಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ |
| 7 | ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ |
| | ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಅಭಿವೃದ್ಧಿ ಕಾರ್ಯಕ್ರಮಗಳು |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿವೇತನ |
| 3 | ಅರಿವು ಮೂಡಿಸುವ ಕಾರ್ಯಕ್ರಮ |
| 4 | ಮೂಲಭೂತ ಸೌಕರ್ಯಗಳು |
| 5 | ವಸತಿ ಸೌಲಭ್ಯ |
| 6 | ನಿವೇಶನ ಹಂಚಿಕೆಗಾಗಿ ಜಮೀನು ಖರೀದಿ |
| 7 | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ದಿ ನಿಗಮದ ಮೂಲಕ ಅನುಷ್ಠಾನ ಮಾಡಲಾಗುತ್ತಿರುವ ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳು |
| | ವಿವಿಧ ಸಮುದಾಯಗಳ ಅಭಿವೃದ್ದಿ |
| 1 | ಹಿಂದುಳಿದ ವರ್ಗಗಳ ಸಮುದಾಯಗಳು ನಿರ್ಮಿಸುವ ಸಮುದಾಯ ಭವನಗಳಿಗೆ ಸಹಾಯಾನುಧಾನ |
| 2 | ಹಿಂದುಳಿದ ವರ್ಗಗಳ ಸಂಘ-ಸಂಸ್ಥೆಗಳು ನಡೆಸುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಒಂದು ಬಾರಿಯ ಅನುದಾನ |
| 3 | ದೇವರಾಜ ಅರಸು ಭವನ ನಿರ್ಮಾಣ |

**1. ಶಿಕ್ಷಣ ಮತ್ತು ಉದ್ಯೋಗದಲ್ಲಿ ಹಿಂದುಳಿದ ವರ್ಗದವರಿಗೆ ಮೀಸಲಾತಿ:-**

ಹಿಂದುಳಿದ ವರ್ಗಗಳಿಗೆ ಸರ್ಕಾರದ ದಿನಾಂಕ: 30-03-2002 ರ ಆದೇಶದನುಸಾರ ಭಾರತದ ಸಂವಿಧಾನದ ಅನುಚ್ಚೇದ 15(4) ಹಾಗೂ 16(4) ರಡಿಯಲ್ಲಿ ಶೇಕಡ 32 ಮೀಸಲಾತಿ ಸೌಲಭ್ಯವನ್ನು ನೇಮಕಾತಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಉದ್ದೇಶಕ್ಕಾಗಿ ನೀಡಲಾಗಿದೆ. ಹಿಂದುಳಿದ ವರ್ಗಗಳ ವರ್ಗೀಕರಣ ಹಾಗೂ ನೀಡಿರುವ ಮೀಸಲಾತಿ ಸೌಲಭ್ಯ ಈ ಕೆಳಕಂಡಂತಿವೆ.

| ಪ್ರವರ್ಗ-I | ಪ್ರವರ್ಗ- IIA | ಪ್ರವರ್ಗ- IIB | ಪ್ರವರ್ಗ- IIIA | ಪ್ರವರ್ಗ- IIIB |
|---|---|---|---|---|
| 4% | 15% | 4% | 4% | 5% |

## ಜಿಲ್ಲಾ ಮಟ್ಟದಲ್ಲಿ

- **ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು**
  - ಜಿಲ್ಲಾ ಅಧಿಕಾರಿಗಳು<br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
    - ಪತ್ರಾಂಕಿತ<br>ವ್ಯವಸ್ಥಾಪಕರು
      - ಲೆಕ್ಕ ಅಧೀಕ್ಷರು
    - ಹಿಂದುಳಿದ ವರ್ಗಗಳ<br>ಕಲ್ಯಾಣಾಧಿಕಾರಿ
      - ಕಛೇರಿ<br>ಮೇಲ್ವಿಚಾರಕರು
        - ಸಿಬ್ಬಂದಿ

## ತಾಲ್ಲೂಕು ಮಟ್ಟದಲ್ಲಿ

- **ಕಾರ್ಯನಿರ್ವಾಹಣಾಧಿಕಾರಿ<br>ತಾಲ್ಲೂಕು ಪಂಚಾಯತ್**
  - **ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು<br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
    - ಸಿಬ್ಬಂದಿ
      - ನಿಲಯ ಪಾಲಕರು<br>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ
        - ಕಿರಿಯ ನಿಲಯ ಮೇಲ್ವಿಚಾರಕರು<br>ಹಾಗೂ ಸಿಬ್ಬಂದಿ
      - ನಿಲಯ ಮೇಲ್ವಿಚಾರಕರು<br>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ<br>ಹಾಗೂ ಸಿಬ್ಬಂದಿ